KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೪	ಬೆಂಗಳೂರು, ಗುರುವಾರ, ನವೆಂಬರ್ ೧೯, ೨೦೦೯ (ಕಾರ್ತೀಕ ೨೮, ಶಕ ವರ್ಷ ೧೯೩೧)	ಸಂಚಿಕೆ ೪೬

ಭಾಗ – ೬

ಬೆಂಗಳೂರು ವಿಭಾಗಕ್ಕೆ ಮತ್ತು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು, ಚಿತ್ರದುರ್ಗ, ದಾವಣಗೆರೆ ಮತ್ತು ಶಿವಮೊಗ್ಗ ಜಿಲ್ಲೆಗಳಿಗೆ ಸ್ಥಳೀಯವಾಗಿ ಅನ್ವಯವಾಗುವ ಅಧಿಸೂಚನೆಗಳು ಮತ್ತು ಆದೇಶಗಳು.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಅಧಿಕೃತ ಜ್ಞಾಪನ

ನಂ: ಎಲ್‌ಆರ್‌ಎಫ್ (ಎನ್‌ಎ) (109) ಸಿಆರ್ 129/2009–10, ಬೆಂಗಳೂರು, ದಿನಾಂಕ: 1ನೇ ಅಕ್ಟೋಬರ್ 2009

ವಿಷಯ: ಬರ್ಕ್‌ಲಿ ಲರ್ನಿಂಗ್ ಪ್ರೈ.ಲಿ., ನಂ.1229, ಬಿ ಸೆಕ್ಟರ್, 2ನೇ ಫೇಸ್, 8ನೇ ಬಿ ಕ್ರಾಸ್, 1ನೇ ಮೈನ್ ರೋಡ್, ಯಲಹಂಕ ನ್ಯೂ ಟೌನ್, ಬೆಂಗಳೂರು–560064 ರವರು ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ಕೆ.ಆರ್. ಪುರ ಗ್ರಾಮದ ಸ.ನಂ.7/2 ರಲ್ಲಿ 1–00 ಎಕರೆ ಮತ್ತು 8/3 ರಲ್ಲಿ 2–38 ಎಕರೆ ಒಟ್ಟು 3–38 ಎಕರೆ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಕರ್ನಾಟಕ ಭೂ ಸುಧಾರಣಾ ಕಾಯ್ದೆ ಕಲಂ 109 ರಡಿ ಖರೀದಿಸಲು ಅನುಮತಿ ಕೋರಿರುವ ಬಗ್ಗೆ.

ಬರ್ಕ್‌ಲಿ ಲರ್ನಿಂಗ್ ಪ್ರೈ.ಲಿ., ನಂ:1229, ಬಿ ಸೆಕ್ಟರ್, 2ನೇ ಫೇಸ್, 8ನೇ ಬಿ ಕ್ರಾಸ್, 1ನೇ ಮೈನ್ ರೋಡ್, ಯಲಹಂಕ ನ್ಯೂ ಟೌನ್, ಬೆಂಗಳೂರು–560064 ರವರು ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ಕೆ.ಆರ್.ಪುರ ಗ್ರಾಮದ ಸ.ನಂ: 7/2 ರಲ್ಲಿ 1–00 ಎಕರೆ ಮತ್ತು 8/3 ರಲ್ಲಿ 2–38 ಎಕರೆ ಒಟ್ಟು 3–38 ಎಕರೆ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109 ರಡಿ ಖರೀದಿಸಲು ಮಾಡಿರುವ ಬೇಡಿಕೆ ಹಾಗೂ ನಮೂನೆ–15ಎ ಮತ್ತು ನಮೂನೆ–15ಎಎ ರಲ್ಲಿ ನೀಡಿದ ಮಾಹಿತಿ ಅನುಸರಿಸಿ ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪವಿಭಾಗ, ಬೆಂಗಳೂರು ರವರ ಪತ್ರದ ನಂ: ಎಲ್‌ಆರ್‌ಎಫ್ ಬಿ.ಎನ್.ಎ ಸಿಆರ್ 13/2009–10 ದಿನಾಂಕ: 30.09.2009 ರಲ್ಲಿ ಪ್ರಸ್ತಾವಿತ ಕೆ.ಆರ್.ಪುರ ಗ್ರಾಮದ ಸ.ನಂ: 7/2 ರಲ್ಲಿ 1–00 ಎಕರೆ ಮತ್ತು 8/3 ರಲ್ಲಿ 2–38 ಎಕರೆ ಒಟ್ಟು 3–38 ಎಕರೆ ಜಮೀನನ್ನು ಖರೀದಿಸಲು ಸದರಿ ಸಂಸ್ಥೆಗೆ ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109(1)(11) ರಡಿ ವಿನಾಯ್ತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಸಂಸ್ಥೆಯು ನೋಂದಣಿ ಸಂಖ್ಯೆ: ಯು 80903 ಕೆ.ಎ 2009 ಪಿಟಿಸಿ 050598 ದಿನಾಂಕ: 10.08.2009 ರಲ್ಲಿ ನೊಂದಾಯಿಸಲ್ಪಟ್ಟಿದೆ. ಖಾತೆದಾರರಿಂದ ಜಮೀನು ಖರೀದಿಸಲು ಕರಾರು ಪತ್ರ ಮಾಡಿಕೊಂಡಿರುತ್ತಾರೆ.

ಪ್ರಸ್ತಾಪಿತ ಜಮೀನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಕಾಯ್ದೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109ರ ಪ್ರಕಾರ ಶೈಕ್ಷಣಿಕ ಉದ್ದೇಶಕ್ಕೆ 4 ಯೂನಿಟ್‌ಗಳವರೆಗೆ ಜಮೀನು ಹೊಂದಲು ಅವಕಾಶ ಕಲ್ಪಿಸಿದೆ. ಈ ಪ್ರಸ್ತಾವನೆ ಕರ್ನಾಟಕ ತಿದ್ದುಪಡಿ ಕಾಯ್ದೆ 1995ರ ಪ್ರಕಾರ ಕಲಂ 109 (1) (ii) ಮತ್ತು ಕರ್ನಾಟಕ ಭೂ ಸುಧಾರಣೆ ತಿದ್ದುಪಡಿ ಕಾಯಿದೆ 1961 ಕಲಂ 63, 79ಎ, 79ಬಿ ಅಥವಾ 80ಕ್ಕೆ ವಿನಾಯ್ತಿ ನೀಡಿ ಬೆಂಗಳೂರು ಉತ್ತರ (ಅಪರ) ತಾಲ್ಲೂಕು, ಹೆಸರಘಟ್ಟ ಹೋಬಳಿ, ಕೆ.ಆರ್.ಪುರಂ ಗ್ರಾಮದ ಸ.ನಂ. 7/2 ರಲ್ಲಿ 1–00 ಎಕರೆ ಮತ್ತು 8/3 ರಲ್ಲಿ 2–38 ಎಕರೆ ಒಟ್ಟು 3–38 ಎಕರೆ ಜಮೀನನ್ನು ಬರ್ಕ್‌ಲಿ ಲರ್ನಿಂಗ್ ಪ್ರೈ.ಲಿ., ನಂ:1229, ಬಿ ಸೆಕ್ಟರ್, 2ನೇ ಫೇಸ್, 8ನೇ ಬಿ ಕ್ರಾಸ್, 1ನೇ ಮೈನ್ ರೋಡ್, ಯಲಹಂಕ ನ್ಯೂ ಟೌನ್, ಬೆಂಗಳೂರು–560064 ರವರಿಗೆ ಶೈಕ್ಷಣಿಕ ಉದ್ದೇಶಕ್ಕಾಗಿ ಖರೀದಿಸಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961 ರ ಕಲಂ 109 (1) (ii) ರಡಿ ಹಾಗೂ ಸರ್ಕಾರದ ತಿದ್ದುಪಡಿ ಅಧಿಸೂಚನೆ ನಂ:ವ್ಯಶಾಇ.47/ಶಾಸನ/2001: ಬೆಂಗಳೂರು, ದಿನಾಂಕ: 23.04.2003 ರಂತೆ ಶೈಕ್ಷಣಿಕ ಮತ್ತು ಚಾರಿಟೇಬಲ್ ಉದ್ದೇಶಕ್ಕೆ 2 ಯುನಿಟ್‌ಗಳಿದ್ದು, ಜಮೀನನ್ನು ಹೊಂದಲು ಅವಕಾಶ ಕಲ್ಪಿಸಿದೆ. ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಅನುಮತಿ ನೀಡಿದೆ.

ಷರತ್ತುಗಳು

1. ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷದೊಳಗಾಗಿ ಉಪಯೋಗಿಸಿಕೊಳ್ಳತಕ್ಕದ್ದು ಮತ್ತು ಈ ಬಗ್ಗೆ ತಹಸೀಲ್ದಾರ್‌ರವರ ಮೂಲಕ ಈ ಕಛೇರಿಗೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.
2. ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1995 ಕಲಂ 3 ರಲ್ಲಿ ಹೇಳಿರುವಂತೆ ಶೇಕಡ 55 ಪೇಯಿಡ್ ಅಪ್ ಷೇರು ಬಂಡವಾಳ ಹೊಂದಿರುವ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಸಂಘ ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
3. ಸದರಿ ಜಮೀನು ಸಿ.ಡಿ.ಪಿ ಪ್ರಕಾರ ಹಸಿರು ವಲಯದಲ್ಲಿ ಬರುತ್ತಿದ್ದು, ಶೈಕ್ಷಣಿಕ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳತಕ್ಕದ್ದು. ಇದನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅನುಮತಿ ಪಡೆಯದೆ ಹಾಗೂ ಅನ್ಯಕ್ರಾಂತ ಪಡಿಸದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
4. ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಭೂ ಕಂದಾಯ ಕಾಯಿದೆ 1964ರ ಕಲಂ 95 ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯಬೇಕು. ಅನಧಿಕೃತ ಕಟ್ಟಡಗಳನ್ನು ಸಕ್ರಮಗೊಳಿಸುವ ಷರತ್ತಿಗೆ ಒಳಪಡಿಸಿದೆ.
5. ಈ ಜಮೀನು ನಗರಾಭಿವೃದ್ಧಿ ಪ್ರಾಧಿಕಾರ, ಸಿ.ಡಿ.ಪಿ, ಒ.ಡಿ.ಪಿ ಮತ್ತು ಹಸಿರು ವಲಯ ವ್ಯಾಪ್ತಿಯೊಳಗೆ ಬಂದರೆ ಅದರಂತೆ ಅನುಮತಿ ಪಡೆದು ಉಪಯೋಗಿಸಿಕೊಳ್ಳತಕ್ಕದ್ದು.
6. ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾದ ಅನುಮತಿಯನ್ನು ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣ ಮುಕ್ತವಾಗಿಸಿ ಸರ್ಕಾರದಲ್ಲಿ ನಿಹಿತ ಮಾಡಲಾಗುವುದು.
7. ಈ ಅನುಮತಿ ಭೂ ಸುಧಾರಣೆ ಕಾಯಿದೆ 1961 ರ ಕಲಂ 109 ರನ್ವಯ ಮಾತ್ರ ಮಾಡಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

ಹೆಚ್. ರಾಮಾಂಜನೇಯ

ಪಿ.ಆರ್. 443 ವಿಶೇಷ ಜಿಲ್ಲಾಧಿಕಾರಿಗಳು (ಕಂ), ಬೆಂಗಳೂರು ಜಿಲ್ಲೆ, ಬೆಂಗಳೂರು.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಅಧಿಕೃತ ಜ್ಞಾಪನ

ನಂ: ಎಲ್.ಆರ್.ಎಫ್(ಪೂ)(109) ಸಿಆರ್ 3/2009–10, ಬೆಂಗಳೂರು, ದಿನಾಂಕ: 7ನೇ ಅಕ್ಟೋಬರ್ 2009

ವಿಷಯ: ಕಂಪಾಸಿನಿಸ್ಟ್ ಸಿಸ್ಟರ್ಸ್ ಸರ್ವೆಂಟ್ಸ್ ಆಫ್ ಮೇರಿ ಸೊಸೈಟಿ, ನಂ: 7, ಬ್ಲಾಕ್ ನಂ: 2, ಕಾರ್ಮೆಲಾ ರಾಮ್, ದೊಡ್ಡಕನ್ನಲ್ಲಿ, ಬೆಂಗಳೂರು ರವರು ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಚಿಕ್ಕಬೆಳ್ಳಂಡೂರು ಗ್ರಾಮದ ಸ.ನಂ. 7/1ರಲ್ಲಿ 1–00 ಎಕರೆ ವಿಸ್ತೀರ್ಣದ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109 ರಡಿ ಖರೀದಿಗೆ ಪಡೆಯಲು ಅನುಮತಿ ಕೋರಿರುವ ಬಗ್ಗೆ.

ಕಂಪಾಸಿನಿಸ್ಟ್ ಸಿಸ್ಟರ್ಸ್ ಸರ್ವೆಂಟ್ಸ್ ಆಫ್ ಮೇರಿ ಸೊಸೈಟಿ, ನಂ: 7, ಬ್ಲಾಕ್ ನಂ: 2, ಕಾರ್ಮೆಲಾ ರಾಮ್, ದೊಡ್ಡಗಕನ್ನಲ್ಲಿ, ಬೆಂಗಳೂರು ರವರು ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಚಿಕ್ಕಬೆಳ್ಳಂಡೂರು ಗ್ರಾಮದ ಸ.ನಂ. 7/1ರಲ್ಲಿ 1–00 ಎಕರೆ ವಿಸ್ತೀರ್ಣದ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ. 109 ರಡಿ ಖರೀದಿಗೆ ಪಡೆಯಲು ಮಾಡಿರುವ ಬೇಡಿಕೆ ಹಾಗೂ ನಮೂನೆ–15ಎ ಮತ್ತು ನಮೂನೆ–15ಎಎ ರಲ್ಲಿ ನೀಡಿದ ಮಾಹಿತಿ ಅನುಸರಿಸಿ ತಹಸೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ರವರ ಪತ್ರ ಸಂಖ್ಯೆ: ಎಲ್.ಆರ್.ಎಫ್ ಸಿಆರ್–17/2009–10 ದಿನಾಂಕ: 14.09.2009 ರಲ್ಲಿ ಪ್ರಸ್ತಾಪಿತ ಚಿಕ್ಕಬೆಳ್ಳಂಡೂರು ಗ್ರಾಮದ ಸ.ನಂ. 7/1ರಲ್ಲಿ 1–00 ಎಕರೆ ಜಮೀನನ್ನು ಖರೀದಿಗೆ ಪಡೆಯಲು ಸದರಿ ಸಂಸ್ಥೆಗೆ ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109(1)(11)ರಡಿ ವಿನಾಯ್ತಿ ನೀಡಲು ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಸಂಸ್ಥೆಯು, ಬೆಂಗಳೂರು ನಗರ ಜಿಲ್ಲಾ ಸಂಘಗಳ ನೊಂದಣಾಧಿಕಾರಿಗಳ ಕಛೇರಿ, ಬೆಂಗಳೂರು ಇಲ್ಲಿ ನೊಂದಣಿ ಸಂಖ್ಯೆ: 471/96–97 ದಿನಾಂಕ: 08.10.1996 ರಂದು ನೊಂದಾಯಿಸಲ್ಪಟ್ಟಿದೆ. ಖಾತೆದಾರರಿಂದ ಜಮೀನು ಖರೀದಿಗೆ ಪಡೆಯಲು ಕರಾರು ಪತ್ರ ಮಾಡಿಕೊಂಡಿರುತ್ತಾರೆ.

ಪ್ರಸ್ತಾಪಿತ ಜಮೀನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ಪಿ.ಟಿ.ಸಿ.ಎಲ್) ಕಾಯ್ದೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು ಹಾಗೂ ಇನ್ನಿತರ ಪರಭಾರೆ ನಿಷೇಧ ಕಾಯ್ದೆಗಳ ವ್ಯಾಪ್ತಿಗೆ ಒಳಪಡುವುದಿಲ್ಲ.

ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109ರ ಪ್ರಕಾರ ಶೈಕ್ಷಣಿಕ ಉದ್ದೇಶಕ್ಕೆ 04 ಯೂನಿಟ್‌ಗಳವರೆಗೆ ಜಮೀನು ಹೊಂದಲು ಅವಕಾಶ ಕಲ್ಪಿಸಲಾಗಿತ್ತು. ಆದರೆ ಈ ಪ್ರಸ್ತಾವನೆಗೆ ಕರ್ನಾಟಕ ಭೂ ಸುಧಾರಣೆ ತಿದ್ದುಪಡಿ ಕಾಯ್ದೆ 1995ರ ಪ್ರಕಾರ ಕಲಂ 109 (1) (ii) ರಡಿಯಲ್ಲಿ ಹಾಗೂ ಸರ್ಕಾರದ ತಿದ್ದುಪಡಿ ಅಧಿಸೂಚನೆ ಸಂ: ವ್ಯಶಾಇ 47 ಶಾಸನ 2001 ಬೆಂಗಳೂರು ದಿನಾಂಕ: 23.04.03 ರಂತೆ ಕಲಂ 63, 79ಎ, 79ಬಿ ಮತ್ತು 80ಕ್ಕೆ ವಿನಾಯ್ತಿ ನೀಡಿ, ಶೈಕ್ಷಣಿಕ ಉದ್ದೇಶಕ್ಕಾಗಿ 02 ಯೂನಿಟ್ ಜಮೀನನ್ನು ಖರೀದಿಸಿ ಹೊಂದಲು ಅವಕಾಶ ಕಲ್ಪಿಸಿರುವುದರಿಂದ ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಚಿಕ್ಕಬೆಳ್ಳಂಡೂರು ಗ್ರಾಮದ ಸ.ನಂ. 7/1ರಲ್ಲಿ 1–00 ಎಕರೆ ವಿಸ್ತೀರ್ಣದ ಜಮೀನನ್ನು ಖರೀದಿಸಲು ಕಂಪಾಸಿನಿಸ್ಟ್ ಸಿಸ್ಟರ್ಸ್ ಸರ್ವೆಂಟ್ಸ್ ಆಫ್ ಮೇರಿ ಸೊಸೈಟಿ, ನಂ: 7, ಬ್ಲಾಕ್ ನಂ: 2, ಕಾರ್ಮೆಲಾ ರಾಮ್, ದೊಡ್ಡಕನ್ನಲ್ಲಿ, ಬೆಂಗಳೂರು ರವರಿಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಅನುಮತಿ ನೀಡಿದೆ.

ಷರತ್ತುಗಳು

1. ಯಾವ ಉದ್ದೇಶಕ್ಕಾಗಿ ಜಮೀನನ್ನು ಖರೀದಿಸಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷದೊಳಗಾಗಿ ಉಪಯೋಗಿಸಿಕೊಳ್ಳತಕ್ಕದ್ದು ಮತ್ತು ಈ ಬಗ್ಗೆ ತಹಸೀಲ್ದಾರ್‌ರವರ ಮೂಲಕ ಈ ಕಛೇರಿಗೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.
2. ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1995 ಕಲಂ 3 ರಲ್ಲಿ ಹೇಳಿರುವಂತೆ ಶೇಕಡ 55 ಪೇಯಿಡ್ ಅಪ್ ಷೇರು ಬಂಡವಾಳ ಹೊಂದಿರುವ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಸಂಘ ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
3. ಸದರಿ ಜಮೀನು ಸಿ.ಡಿ.ಪಿ ಪ್ರಕಾರ ಹಸಿರು ವಲಯದಲ್ಲಿ ಬರುತ್ತಿದ್ದು, ಉದ್ದೇಶಿತ ಯೋಜನೆಗೆ ಉಪಯೋಗಿಸಿಕೊಳ್ಳತಕ್ಕದ್ದು. ಇದನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅನುಮತಿ ಪಡೆಯದೆ ಹಾಗೂ ಅನ್ಯಕ್ರಾಂತ ಪಡಿಸದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
4. ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಭೂ ಕಂದಾಯ ಕಾಯಿದೆ 1964ರ ಕಲಂ 95 ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯಲು ಹಾಗೂ ಒಂದು ವೇಳೆ ಅನಧಿಕೃತ ಕಟ್ಟಡಗಳನ್ನು ನಿರ್ಮಿಸಿದ್ದಲ್ಲಿ ಸಕ್ರಮಗೊಳಿಸುವ ಷರತ್ತಿಗೆ ಒಳಪಡಿಸಿದೆ.
5. ಈ ಜಮೀನು ನಗರಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರಿಂದ ಸಿ.ಡಿ.ಪಿ, ಒ.ಡಿ.ಪಿ ಮತ್ತು ಹಸಿರು ವಲಯ ವ್ಯಾಪ್ತಿಯೊಳಗೆ ಬಂದರೆ ಅದರಂತೆ ಅನುಮತಿ ಪಡೆದು ಉಪಯೋಗಿಸಿಕೊಳ್ಳತಕ್ಕದ್ದು.
6. ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾದ ಅನುಮತಿಯನ್ನು ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣ ಮುಕ್ತವಾಗಿಸಿ ಸರ್ಕಾರದಲ್ಲಿ ನಿಹಿತಗೊಳಿಸಿಕೊಳ್ಳಲಾಗುವುದು.

7. ಈ ಅನುಮತಿ ಕರ್ನಾಟಕ ಭೂ ಸುಧಾರಣೆ ಕಾಯಿದೆ 1961ರ ಕಲಂ 109 ರನ್ವಯ ಮಾತ್ರ ನೀಡಲಾಗಿರುತ್ತದೆ. ಇತರೆ ಕಾಯ್ದೆ ಹಾಗೂ ಕಾನೂನುಗಳನ್ನು ಉಲ್ಲಂಘಿಸಿದಲ್ಲಿ ಸಂಬಂಧಿಸಿದ ಕಾಯ್ದೆಯಡಿಯಲ್ಲಿ ಅಗತ್ಯ ಕ್ರಮ ಜರುಗಿಸಲು ಅವಕಾಶ ನೀಡಲಾಗಿರುತ್ತದೆ.
8. ಈ ಜಮೀನಿನ ಸುತ್ತಮುತ್ತಲಿನ ಗ್ರಾಮದ ಬಡ ವಿದ್ಯಾರ್ಥಿಗಳಿಗೆ ಉಚಿತ ಶೈಕ್ಷಣಿಕ ವಿದ್ಯಾಭ್ಯಾಸಕ್ಕೆ ಶೇ: 5%ರಷ್ಟು ಸ್ಥಾನಗಳನ್ನು ನೀಡತಕ್ಕದ್ದು.

ಹೆಚ್. ರಾಮಾಂಜನೇಯ

ಪಿ.ಆರ್. 444 ವಿಶೇಷ ಜಿಲ್ಲಾಧಿಕಾರಿಗಳು (ಕಂ), ಬೆಂಗಳೂರು ಜಿಲ್ಲೆ, ಬೆಂಗಳೂರು.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಂಗಳೂರು ಜಿಲ್ಲೆ, ಬೆಂಗಳೂರು

ಅಧಿಕೃತ ಜ್ಞಾಪನ

ನಂ: ಎಲ್.ಆರ್.ಎಫ್(ಎಸ್)(109) ಸಿ.ಆರ್: 19/08–09, ಬೆಂಗಳೂರು, ದಿನಾಂಕ: 9ನೇ ಅಕ್ಟೋಬರ್ 2009

ವಿಷಯ: ಲಾರಾಯಲೆ ಹೋಮ್ಸ್ ನಂ.318, 1ನೇ ಕ್ರಾಸ್, ಸಿ.ಟಿ.ಬೆಡ್, ಟಿ.ಆರ್.ನಗರ, ಬೆಂಗಳೂರು 28 ರವರು ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹುಳಿಮಾವು ಗ್ರಾಮದ ಸ.ನಂ. 82/4 ರಲ್ಲಿ 0–23.08 ಗುಂಟೆ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಹೊಂದಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109 ರಡಿ ಅನುಮತಿ ಕೋರಿರುವ ಬಗ್ಗೆ.

ಉಲ್ಲೇಖ: ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ಪತ್ರ ಸಂಖ್ಯೆ: ಎಲ್.ಆರ್.ಎಫ್ (09) ಸಿ.ಆರ್ 12/08–09, ದಿನಾಂಕ: 13.04.2009.

ಲಾರಾಯಲೆ ಹೋಮ್ಸ್, ನಂ. 318, 1ನೇ ಕ್ರಾಸ್, ಸಿ.ಟಿ.ಬೆಡ್, ಟಿ.ಆರ್.ನಗರ, ಬೆಂಗಳೂರು 28 ರವರು ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ಹುಳಿಮಾವು ಗ್ರಾಮದ ಸ.ನಂ. 82/4 ರಲ್ಲಿ 0–23.08 ಗುಂಟೆ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಹೊಂದಲು ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ. 109 ರಡಿ ಖರೀದಿಸಲು ಮಾಡಿರುವ ಬೇಡಿಕೆ, ನಮೂನೆ–15ಎ ರಲ್ಲಿ ನೀಡಿದ ಮಾಹಿತಿ ಹಾಗೂ ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ವರದಿ ಅನುಸರಿಸಿ ಪ್ರಸ್ತಾವಿತ ಹುಳಿಮಾವು ಗ್ರಾಮದ ಸ.ನಂ. 82/4 ರಲ್ಲಿ 0–23.08 ಗುಂಟೆ ಜಮೀನು ಶೈಕ್ಷಣಿಕ ಉದ್ದೇಶಕ್ಕಾಗಿ ಹೊಂದಲು ಸದರಿ ಸಂಸ್ಥೆಗೆ ಕರ್ನಾಟಕ ಭೂ ಸುಧಾರಣೆ ಕಾಯ್ದೆ 1961ರ ಕಲಂ 109 (1)(11)ರಡಿ ಅನುಮತಿ ನೀಡಿದೆ.

ಷರತ್ತುಗಳು

1. ಯಾವ ಉದ್ದೇಶಕ್ಕಾಗಿ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಹೊಂದಲು ಅನುಮತಿ ನೀಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಸದರಿ ಜಮೀನನ್ನು ಎರಡು ವರ್ಷದೊಳಗಾಗಿ ಉಪಯೋಗಿಸಿಕೊಳ್ಳತಕ್ಕದ್ದು ಮತ್ತು ಈ ಬಗ್ಗೆ ತಹಸೀಲ್ದಾರ್ ರವರ ಮೂಲಕ ಈ ಕಛೇರಿಗೆ ಲಿಖಿತವಾಗಿ ಮಾಹಿತಿ ನೀಡತಕ್ಕದ್ದು.
2. ವಿನಾಯಿತಿ ಪಡೆದವರು ಸರ್ಕಾರ ಅಥವಾ ಯಾವುದೇ ಷೆಡ್ಯೂಲ್ ಬ್ಯಾಂಕ್ ಅಥವಾ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಒಂದಕ್ಕೆ ಅಥವಾ ಕಂಪನಿ ಕಾಯ್ದೆ, 1995 ಕಲಂ 3 ರಲ್ಲಿ ಹೇಳಿರುವಂತೆ ಶೇಕಡ 55 ಪೆಯಿಡ್ ಅಪ್ ಷೇರು ಬಂಡವಾಳ ಹೊಂದಿರುವ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಸಂಘ ಸಂಸ್ಥೆ ಒಂದಕ್ಕೆ ಖಾತರಿ ನೀಡಿ ಅಡಮಾನ ಹಾಗೂ ಇತರೆ ಹೊಣೆ ಮಾಡಿ ಸಾಲ ಪಡೆಯುವುದನ್ನು ಹೊರತುಪಡಿಸಿ ಸದರಿ ಜಮೀನನ್ನು ನಿಗದಿತ ಉದ್ದೇಶಕ್ಕಲ್ಲದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
3. ಸದರಿ ಜಮೀನು ಸಿ.ಡಿ.ಪಿ ಪ್ರಕಾರ ಹಸಿರು ವಲಯದಲ್ಲಿ ಬರುತ್ತಿದ್ದು, ಶೈಕ್ಷಣಿಕ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳತಕ್ಕದ್ದು. ಇದನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅನುಮತಿ ಪಡೆಯದೆ ಹಾಗೂ ಅನ್ಯಕ್ರಾಂತ ಪಡಿಸದೆ ಬೇರೆ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.
4. ಈ ಜಮೀನನ್ನು ವ್ಯವಸಾಯದಿಂದ ವ್ಯವಸಾಯೇತರ ಉದ್ದೇಶಕ್ಕಾಗಿ ಪರಿವರ್ತಿಸಿಕೊಳ್ಳಲು ಭೂ ಕಂದಾಯ ಕಾಯಿದೆ 1964ರ ಕಲಂ 95 ರಂತೆ ಜಿಲ್ಲಾಧಿಕಾರಿಗಳಿಂದ ಅನುಮತಿ ಪಡೆಯಬೇಕು. ಅನಧಿಕೃತ ಕಟ್ಟಡಗಳನ್ನು ಸಕ್ರಮಗೊಳಿಸುವ ಷರತ್ತಿಗೆ ಒಳಪಡಿಸಿದೆ.
5. ಈ ಜಮೀನು ನಗರಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರಿಂದ ಸಿ.ಡಿ.ಪಿ, ಒ.ಡಿ.ಪಿ ಮತ್ತು ಹಸಿರು ವಲಯ ವ್ಯಾಪ್ತಿಯೊಳಗೆ ಬಂದರೆ ಅದರಂತೆ ಅನುಮತಿ ಪಡೆದು ಜಮೀನನ್ನು ಉಪಯೋಗಿಸಿಕೊಳ್ಳತಕ್ಕದ್ದು.
6. ಮೇಲಿನ ಷರತ್ತುಗಳು ಉಲ್ಲಂಘನೆಯಾದಲ್ಲಿ ಈಗ ನೀಡಲಾದ ಅನುಮತಿಯನ್ನು ರದ್ದುಪಡಿಸಲಾಗುವುದು ಮತ್ತು ಪ್ರಸ್ತಾಪಿತ ಭೂಮಿಯನ್ನು ಋಣ ಮುಕ್ತವಾಗಿಸಿ ಸರ್ಕಾರದಲ್ಲಿ ನಿಹಿತ ಮಾಡಲಾಗುವುದು.

7. ಈ ಅನುಮತಿ ಭೂ ಸುಧಾರಣೆ ಕಾಯಿದೆ 1961 ರ ಕಲಂ 109 ರನ್ವಯ ಮಾತ್ರ ನೀಡಿರುತ್ತದೆ. ಬೇರೆ ಕಾನೂನುಗಳ ಉಲ್ಲಂಘನೆಯಾದಲ್ಲಿ ಸಂಬಂಧಿಸಿದ ಕಾಯ್ದೆಯಡಿ ಅಗತ್ಯ ಕ್ರಮ ಜರುಗಿಸಲು ಅವಕಾಶವಿರುತ್ತದೆ.

ಹೆಚ್. ರಾಮಾಂಜನೇಯ

ಪಿ.ಆರ್. 445 ವಿಶೇಷ ಜಿಲ್ಲಾಧಿಕಾರಿಗಳು (ಕಂ), ಬೆಂಗಳೂರು ಜಿಲ್ಲೆ, ಬೆಂಗಳೂರು.

ವಿಶೇಷ ಭೂಸ್ವಾಧೀನಾಧಿಕಾರಿಗಳ ಕಾರ್ಯಾಲಯ, ಕೊಟ್ಟೂರು–ಹರಿಹರ ರೈಲ್ವೆ ಬ್ರಾಡ್‌ಗೇಜ್ ಲೈನ್ ನಿರ್ಮಾಣ ಯೋಜನೆ, ಹರಿಹರ, (ದಾವಣಗೆರೆ ಜಿಲ್ಲೆ)

ಕರ್ನಾಟಕ ಭೂಸ್ವಾಧೀನ ಕಾಯ್ದೆ 1894 ರ ಕಲಂ.16(2) ಅಡಿ (ಕಲಂ.17(4)ರಲ್ಲಿ ಓದಲಾದಂತೆ)

(ರೈಲ್ವೆ ಮಾರ್ಗದ ಅಗಲೀಕರಣಕ್ಕಾಗಿ/ಜೆ.ಎಂ.ಸಿ.ಹೆಚ್ಚುವರಿಗಾಗಿ) ಅಧಿಸೂಚನೆ

ನಂ.ಕಂ/ವಿಭೂಸ್ವಾ/ಕೊಹರೈಲ್ವೆ/ಸಿಆರ್/05/2005–06 (ಭಾಗ–4), ದಿನಾಂಕ: 6ನೇ ಅಕ್ಟೋಬರ್ 2009

ಕರ್ನಾಟಕ ಸರ್ಕಾರದವರು 1961ನೇ ಸಾಲಿನ ಕರ್ನಾಟಕ ಅಧಿನಿಯಮ ಕ್ರಮ ಸಂಖ್ಯೆ 16 ರಲ್ಲಿ ತಿದ್ದುಪಡಿಯಾದ 1894ನೇ ಸಾಲಿನ ಭೂ ಸಂಗ್ರಹಣ ಅಧಿನಿಯಮದ (1894ರ ಸಾಲಿನ ಕೇಂದ್ರ ಅಧಿನಿಯಮ 1ರ ಪ್ರಕರಣ 16(2)ರ ಮೇರೆಗೆ ಈ ಮೂಲಕ ಅನುಸೂಚಿಯಡಿ ಸೂಚಿಸಲಾದ ಜಮೀನುಗಳನ್ನು ಒಂದು ಸಾರ್ವಜನಿಕ ಉದ್ದೇಶಕ್ಕಾಗಿ ಅಂದರೆ ಕೊಟ್ಟೂರು–ಹರಿಹರ ರೈಲ್ವೆ ಬ್ರಾಡ್‌ಗೇಜ್ ಲೈನ್ ನಿರ್ಮಾಣಕ್ಕಾಗಿ ಅಧಿಕೃತವಾಗಿ ಸದರಿ ಭೂಸ್ವಾಧೀನ ಅಧಿನಿಯಮದ ಪ್ರಕರಣ 16(2)ರಂತೆ ವಶಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಕಟಿಸಲಾಗಿದೆ. ಹಾಗೂ ನೈರುತ್ಯ ರೈಲ್ವೆ ಇಲಾಖೆಯ ಪರವಾಗಿ ಭೂಸ್ವಾಧೀನಪಡಿಸಲಾಗಿದೆ.

ಅನುಸೂಚಿ

ಜಿಲ್ಲೆ: ದಾವಣಗೆರೆ **ತಾಲ್ಲೂಕು:** ಹರಪನಹಳ್ಳಿ **ಹೋಬಳಿ:** ಕಸಬಾ **ಗ್ರಾಮ:** ಹರಪನಹಳ್ಳಿ

ಕ್ರ. ಸಂ.	ಸರ್ವೆ ನಂಬರು	ತರಹೆ	ಯಾವ ದಿಕ್ಕಿಗೆ ಭೂ ಸ್ವಾಧೀನವಾಗಿದೆ	ಭೂಸ್ವಾಧೀನದ ವಿಸ್ತೀರ್ಣ ಎ–ಸೆಂ.	ಒಟ್ಟು ವಿಸ್ತೀರ್ಣ ಎ–ಸೆಂ	ಆಕಾರ ರೂ–ಪೈ	ವಶಪಡಿಸಿಕೊಂಡ ದಿನಾಂಕ
1	531ಸಿ/3	ಖುಷ್ಕಿ	ಉತ್ತರ	0–06	0–06	0–04	28.08.2007
2	495/ಎ	ಖುಷ್ಕಿ	ದಕ್ಷಿಣ	0–10	0–10	0–06	28.08.2007
3	530/ಎ	ಖುಷ್ಕಿ	ಉತ್ತರ	0–19	0–61	0–36	28.08.2007
			ದಕ್ಷಿಣ	0–42			
4	530/ಸಿ	ಖುಷ್ಕಿ	ದಕ್ಷಿಣ	0–01	0–01	0–01	28.08.2007
5	372/ಬಿ	ಖುಷ್ಕಿ	ಉತ್ತರ	0–19	3–32	2–00	28.08.2007
			ದಕ್ಷಿಣ	0–43			
			ಉತ್ತರ	0–42			
			ದಕ್ಷಿಣ	2–31			28.08.2007
6	382/1	ಖುಷ್ಕಿ	ದಕ್ಷಿಣ	0–98	0–98	0–44	28.08.2007
7	377/ಬಿ3	ಖುಷ್ಕಿ	ದಕ್ಷಿಣ	0–64	0–64	0–86	28.08.2007
8	372/ಸಿ	ಖುಷ್ಕಿ	ಉತ್ತರ	0–53	0–56	0–34	28.08.2007
			ದಕ್ಷಿಣ	0–03			
9	372/ಎ	ಖುಷ್ಕಿ	ಉತ್ತರ	1–00	1–65	0–99	28.08.2007
			ದಕ್ಷಿಣ	0–65			
10	511/ಎ	ಖುಷ್ಕಿ	ದಕ್ಷಿಣ	2–44	2–44	3–12	28.08.2007
11	513	ಖುಷ್ಕಿ	ದಕ್ಷಿಣ	0–80	0–80	0–48	28.08.2007
12	514	ಖುಷ್ಕಿ	ದಕ್ಷಿಣ	0–26	0–26	0–16	28.08.2007
13	506/ಸಿ ಪೈಕಿ	ಖುಷ್ಕಿ	ದಕ್ಷಿಣ	0–65	0–65	0–83	28.08.2007
14	506/ಬಿ ಪೈಕಿ	ಖುಷ್ಕಿ	ದಕ್ಷಿಣ	0–67	0–67	0–86	28.08.2007
15	505/ಎ ಪೈಕಿ	ಖುಷ್ಕಿ	ದಕ್ಷಿಣ	1–11	1–11	1–42	28.08.2007

ಕ್ರ. ಸಂ.	ಸರ್ವೆ ನಂಬರು	ತರಹೆ	ಯಾವ ದಿಕ್ಕಿಗೆ ಭೂ ಸ್ವಾಧೀನವಾಗಿದೆ	ಭೂಸ್ವಾಧೀನದ ವಿಸ್ತೀರ್ಣ ಎ–ಸೆಂ.	ಒಟ್ಟು ವಿಸ್ತೀರ್ಣ ಎ–ಸೆಂ	ಆಕಾರ ರೂ–ಪೈ	ವಶಪಡಿಸಿಕೊಂಡ ದಿನಾಂಕ
16	504/ಇ ಪೈಕಿ	ಖುಷ್ಕಿ	ದಕ್ಷಿಣ	0–36	0–36	0–46	28.08.2007
17	503	ಖುಷ್ಕಿ	ದಕ್ಷಿಣ	0–97	0–97	1–24	28.08.2007
18	377/ಎ ಪೈಕಿ	ಖುಷ್ಕಿ	ದಕ್ಷಿಣ	0–07	0–07	0–09	28.08.2007
19	381/ಎ	ಖುಷ್ಕಿ	ದಕ್ಷಿಣ	0–09	0–09	0–04	28.08.2007
20	502/ಎ	ಖುಷ್ಕಿ	ದಕ್ಷಿಣ	0–03	0–03	0–04	28.08.2007
21	510/ಎ	ಖುಷ್ಕಿ	ದಕ್ಷಿಣ	0–14	0–14	0–18	28.08.2007
					15–52		

ಟಿ. ಮಲ್ಲಪ್ಪ
ಪಿ.ಆರ್. 442 ವಿಶೇಷ ಭೂಸ್ವಾಧೀನಾಧಿಕಾರಿಗಳು,
ಕೊಟ್ಟೂರು–ಹರಿಹರ ರೈಲ್ವೆ ಬ್ರಾಡ್‌ಗೇಜ್ ಲೈನ್ ನಿರ್ಮಾಣ ಯೋಜನೆ, ಹರಿಹರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ನಮೂನೆ–27

ನಂ.ಎಲ್‌ಎನ್‌ಡಿ.ಸಿಆರ್.19/08–09, ದಿನಾಂಕ: 13ನೇ ಅಕ್ಟೋಬರ್ 2009

ವಿಷಯ: ಗೌರಿಬಿದನೂರು ತಾಲ್ಲೂಕು, ಹೊಸೂರು ಹೋಬಳಿ, ಕೊನಗಾನಹಳ್ಳಿ ಗ್ರಾಮದ ಸ.ನಂ.32 ರ ಪೈಕಿ 5–10 ಎಕರೆ ಜಮೀನನ್ನು ಸೈನಿಕರಾದ ಶ್ರೀ ವೆಂಕಟೇಶಪ್ಪ ಬಿನ್ ಅಕ್ಕಲಪ್ಪ ರವರಿಗೆ ಮಂಜೂರು ಮಾಡುವ ವಿಚಾರದಲ್ಲಿ ಸಾರ್ವಜನಿಕ ಹಕ್ಕನ್ನು ನಿವೃತ್ತಿಗೊಳಿಸಿ, ಸದರಿ ಶೀರ್ಷಿಕೆಯಿಂದ ತಗ್ಗಿಸಿ ಮುಂದಿನ ಕ್ರಮ ಕೈಗೊಳ್ಳುವ ವಿಚಾರ.

ಉಲ್ಲೇಖ: 1. ಅಸಿಸ್ಟೆಂಟ್ ಕಮೀಷನರ್, ಚಿಕ್ಕಬಳ್ಳಾಪುರ ಉಪವಿಭಾಗ, ಚಿಕ್ಕಬಳ್ಳಾಪುರ ಇವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.135/04–05, ದಿನಾಂಕ:10/04/2008.

3. ತಹಶೀಲ್ದಾರ್, ಗೌರಿಬಿದನೂರು ತಾಲ್ಲೂಕು ರವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.32/04–05, ದಿನಾಂಕ: 30/11/2007, 27/06/2008 ಮತ್ತು 06/12/08.

94ನೇ ನಿಯಮದ 68(1) ಪ್ರಕರಣದ ಮೇರೆಗಿನ ಘೋಷಣೆ

ಸರ್ಕಾರದ ಸ್ವತ್ತಾಗಿರುವ ಹಾಗೂ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ 'ಸರ್ಕಾರಿ ಖರಾಬ್' ಪ್ರದೇಶದ ಜಮೀನು ಸಾರ್ವಜನಿಕ ಉಪಯೋಗಕ್ಕೆ ಸದರಿ ಉದ್ದೇಶಕ್ಕೆ ಅಗತ್ಯವಿಲ್ಲವೆಂದು ಕಂಡು ಬಂದಿರುವುದರಿಂದ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ 68ನೇ ಪ್ರಕರಣದ (1)ನೇ ಉಪ ಪ್ರಕರಣದಂತೆ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಸದರಿ ಸರ್ಕಾರಿ ಖರಾಬು ಪ್ರದೇಶವು ಸದರಿ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಸದರಿ ಸರ್ಕಾರಿ ಖರಾಬು ಪ್ರದೇಶದ ಜಮೀನಿನ ಮೇಲೆ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಉದ್ದೇಶಿಸಿ ಈ ಮೂಲಕ ಘೋಷಿಸುತ್ತದೆ.

ಸದರಿ 'ಸರ್ಕಾರಿ ಖರಾಬು' ಪ್ರದೇಶದಲ್ಲಿ ಅಥವಾ ಅವರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು ಈ ಜಮೀನನ್ನು ಸರ್ಕಾರದ ಇತರೇ ಉದ್ದೇಶಕ್ಕೆ ಪಡೆದುಕೊಳ್ಳುತ್ತಿರುವುದರಿಂದ ಈ ಅಧಿಸೂಚನೆಯನ್ನು ಹೊರಡಿಸಿದ ತೊಂಬತ್ತು ದಿನಗಳೊಳಗಾಗಿ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು ಅಂತಹ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮವು ಸಂಭವಿಸಿರಬಹುದಾದ ರೀತಿಯನ್ನು ಮತ್ತು ಅಂತಹ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಲೈಮು ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಈ ಕಛೇರಿಗೆ ಲಿಖಿತ ರೂಪದಲ್ಲಿ ತಿಳಿಸತಕ್ಕದ್ದು ಮತ್ತು ಆಕ್ಷೇಪಣೆಗಳನ್ನು ಮತ್ತು ಕ್ಲೈಮುಗಳನ್ನು ಸದರಿ ಪ್ರಕರಣದಲ್ಲಿ ಉಪಬಂಧಿಸಿರುವಂತೆ ಪರಿಶೀಲಿಸಲಾಗುವುದು.

ಅನುಸೂಚಿ

ಜಿಲ್ಲೆ : ಚಿಕ್ಕಬಳ್ಳಾಪುರ
ತಾಲ್ಲೂಕು : ಗೌರಿಬಿದನೂರು
ಹೋಬಳಿ : ಹೊಸೂರು
ಗ್ರಾಮ : ಕೊನಗಾನಹಳ್ಳಿ

ಸರ್ವೆ ನಂಬರು 32 ರ ಪೈಕಿ 5–10 ಎಕರೆ ಜಮೀನು ಮಿಲಿಟರಿಯಲ್ಲಿ ಸೈನಿಕನಾಗಿ ಕೆಲಸ ನಿರ್ವಹಿಸುತ್ತಿರುವ ಶ್ರೀ ವೆಂಕಟೇಶಪ್ಪ ಬಿನ್ ಅಕ್ಕಲಪ್ಪ ಇವರಿಗೆ ಸೈನಿಕರ ಕೋಟಾದಲ್ಲಿ ಮಂಜೂರು ಮಾಡಲು ಸಾರ್ವಜನಿಕರ ಹಕ್ಕು ನಿವೃತ್ತಿಗಾಗಿ ಪ್ರಸ್ತಾಪಿಸಲಾಗಿದೆ.

ಚೆಕ್ಕುಬಂದಿ

ಪೂರ್ವಕ್ಕೆ	:	ಸ.ನಂ.32ರ ಪೈಕಿ ದಾರಿ ಮತ್ತು ಸ.ನಂ.59 ರ ಜಮೀನು
ಪಶ್ಚಿಮಕ್ಕೆ	:	ಸ.ನಂ.32 ರ ಉಳಿಕೆ ಜಮೀನು
ಉತ್ತರಕ್ಕೆ	:	ಸ.ನಂ. 67 ರ ಜಮೀನು
ದಕ್ಷಿಣಕ್ಕೆ	:	ಸ.ನಂ. 59 ರ ಜಮೀನು ಮತ್ತು ಸ.ನಂ. 32 ರ ಉಳಿಕೆ ಜಮೀನು

ಪಿ.ಆರ್. 460 ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ನಮೂನೆ–27

ನಂ.ಎಲ್ಎನ್‌ಡಿ.ಸಿಆರ್.13/09–10, ದಿನಾಂಕ: 13ನೇ ಅಕ್ಟೋಬರ್ 2009

ವಿಷಯ: ಗೌರಿಬಿದನೂರು ತಾಲ್ಲೂಕು, ಹೊಸೂರು ಹೋಬಳಿ, ಕೊನಗಾನಹಳ್ಳಿ ಗ್ರಾಮದ ಸ.ನಂ.32 ರ ಪೈಕಿ 3–20 ಎಕರೆ ಜಮೀನನ್ನು ಸೈನಿಕರಾದ ಶ್ರೀ ರಿಯಾಜ್ ಖಾನ್ ಬಿನ್ ಅಲ್ಲಾಬಕಾಷ್ ರವರಿಗೆ ಮಂಜೂರು ಮಾಡುವ ವಿಚಾರದಲ್ಲಿ ಸಾರ್ವಜನಿಕ ಹಕ್ಕನ್ನು ನಿವೃತ್ತಿಗೊಳಿಸಿ, ಸದರಿ ಶೀರ್ಷಿಕೆಯಿಂದ ತಗ್ಗಿಸಿ ಮುಂದಿನ ಕ್ರಮ ಕೈಗೊಳ್ಳುವ ವಿಚಾರ.

ಉಲ್ಲೇಖ: 1. ಅಸಿಸ್ಟೆಂಟ್ ಕಮೀಷನರ್, ಚಿಕ್ಕಬಳ್ಳಾಪುರ ಉಪವಿಭಾಗ, ಚಿಕ್ಕಬಳ್ಳಾಪುರ ಇವರ ವರದಿ ಸಂಖ್ಯೆ: ಎಲ್ಎನ್‌ಡಿ.ಸಿಆರ್.157/08–09, ದಿನಾಂಕ:28/04/2009.

3. ತಹಶೀಲ್ದಾರ್, ಗೌರಿಬಿದನೂರು ತಾಲ್ಲೂಕು ರವರ ವರದಿ ಸಂಖ್ಯೆ: ಎಲ್ಎನ್‌ಡಿ.ಸಿಆರ್.90/07–08, ದಿನಾಂಕ: 30/09/2008.

94ನೇ ನಿಯಮದ 68(1) ಪ್ರಕರಣದ ಮೇರೆಗಿನ ಘೋಷಣೆ

ಸರ್ಕಾರದ ಸ್ವತ್ತಾಗಿರುವ ಹಾಗೂ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ 'ಸರ್ಕಾರಿ ಖರಾಬ್' ಪ್ರದೇಶದ ಜಮೀನು ಸಾರ್ವಜನಿಕ ಉಪಯೋಗಕ್ಕೆ ಸದರಿ ಉದ್ದೇಶಕ್ಕೆ ಅಗತ್ಯವಿಲ್ಲವೆಂದು ಕಂಡು ಬಂದಿರುವುದರಿಂದ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ 68ನೇ ಪ್ರಕರಣದ (1)ನೇ ಉಪ ಪ್ರಕರಣದಂತೆ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಸದರಿ ಸರ್ಕಾರಿ ಖರಾಬು ಪ್ರದೇಶವು ಸದರಿ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಸದರಿ ಸರ್ಕಾರಿ ಖರಾಬು ಪ್ರದೇಶದ ಜಮೀನಿನ ಮೇಲೆ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಉದ್ದೇಶಿಸಿ ಈ ಮೂಲಕ ಘೋಷಿಸುತ್ತದೆ.

ಸದರಿ 'ಸರ್ಕಾರಿ ಖರಾಬು' ಪ್ರದೇಶದಲ್ಲಿ ಅಥವಾ ಅವರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು ಈ ಜಮೀನನ್ನು ಸರ್ಕಾರದ ಇತರೇ ಉದ್ದೇಶಕ್ಕೆ ಪಡೆದುಕೊಳ್ಳುತ್ತಿರುವುದರಿಂದ ಈ ಅಧಿಸೂಚನೆಯನ್ನು ಹೊರಡಿಸಿದ ತೊಂಬತ್ತು ದಿನಗಳೊಳಗಾಗಿ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು ಅಂತಹ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮವು ಸಂಭವಿಸಿರಬಹುದಾದ ರೀತಿಯನ್ನು ಮತ್ತು ಅಂತಹ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಲೈಮು ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಈ ಕಛೇರಿಗೆ ಲಿಖಿತ ರೂಪದಲ್ಲಿ ತಿಳಿಸತಕ್ಕದ್ದು ಮತ್ತು ಆಕ್ಷೇಪಣೆಗಳನ್ನು ಮತ್ತು ಕ್ಲೈಮುಗಳನ್ನು ಸದರಿ ಪ್ರಕರಣದಲ್ಲಿ ಉಪಬಂಧಿಸಿರುವಂತೆ ಪರಿಶೀಲಿಸಲಾಗುವುದು.

ಅನುಸೂಚಿ

ಜಿಲ್ಲೆ	:	ಚಿಕ್ಕಬಳ್ಳಾಪುರ
ತಾಲ್ಲೂಕು	:	ಗೌರಿಬಿದನೂರು
ಹೋಬಳಿ	:	ಹೊಸೂರು
ಗ್ರಾಮ	:	ಕೊನಗಾನಹಳ್ಳಿ

ಸರ್ವೆ ನಂಬರು 32 ರ ಪೈಕಿ 3–20 ಎಕರೆ ಜಮೀನು ಮಿಲಿಟರಿಯಲ್ಲಿ ಸೈನಿಕನಾಗಿ ಕೆಲಸ ನಿರ್ವಹಿಸುತ್ತಿರುವ ಶ್ರೀ ರಿಯಾಜ್ ಖಾನ್ ಬಿನ್ ಅಲ್ಲಾಬಕಾಷ್ ಇವರಿಗೆ ಸೈನಿಕರ ಕೋಟಾದಲ್ಲಿ ಮಂಜೂರು ಮಾಡಲು ಸಾರ್ವಜನಿಕರ ಹಕ್ಕು ನಿವೃತ್ತಿಗಾಗಿ ಪ್ರಸ್ತಾಪಿಸಲಾಗಿದೆ.

ಚಿಕ್ಕುಬಂದಿ

ಪೂರ್ವಕ್ಕೆ	:	ರೀ.ಸ.ನಂ.59 ರ ಜಮೀನು
ಪಶ್ಚಿಮಕ್ಕೆ	:	ರೀ.ಸ.ನಂ.33 ರ ಜಮೀನು
ಉತ್ತರಕ್ಕೆ	:	ರೀ.ಸ.ನಂ.32 ರ ಉಳಿಕೆ ಜಮೀನು
ದಕ್ಷಿಣಕ್ಕೆ	:	ರೀ.ಸ.ನಂ.32 ರ ಉಳಿಕೆ ಜಮೀನು

ಪಿ.ಆರ್. 461 ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ತಹಶೀಲ್ದಾರ್‌ರವರ ಕಾರ್ಯಾಲಯ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್. ಪುರ, ಬೆಂಗಳೂರು

ಸಾರ್ವಜನಿಕ ಪ್ರಕಟಣೆ

ನಮೂನೆ 27

94ನೇ ನಿಯಮದ 68(1)ನೇ ಪ್ರಕರಣದ ಮೇರೆಗಿನ ಘೋಷಣೆ

ನಂ. ಎಲ್.ಎನ್.ಡಿ./ಸಿಆರ್/198/08-09, ದಿನಾಂಕ: 8ನೇ ಅಕ್ಟೋಬರ್ 2009

ಸರ್ಕಾರದ ಸ್ವತ್ತಾಗಿರುವ ಹಾಗೂ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಸಾರ್ವಜನಿಕ ಸರ್ಕಾರಿ ಬಂಡಿ ದಾರಿ ಹಾಗೂ ಬಂಡೆ ಖರಾಬು ಭಾಗವು ಸಾರ್ವಜನಿಕರ ಉಪಯೋಗಕ್ಕೆ ಅಗತ್ಯವಿಲ್ಲವೆಂದು ರಾಜ್ಯ ಸರ್ಕಾರಕ್ಕೆ ಕಂಡು ಬಂದಿರುವುದರಿಂದ,

ಈಗ ಕರ್ನಾಟಕ ಭೂ ಕಂದಾಯ ಅಧಿನಿಯಮದ 1964ರ 68ನೇ ಪ್ರಕರಣದ (1)ನೇ ಉಪಪ್ರಕರಣದಿಂದ ಪ್ರದತ್ತವಾದ ಅಧಿಕಾರಿಗಳನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಸಾರ್ವಜನಿಕ ಬಂಡಿ ದಾರಿ ಹಾಗೂ ಬಂಡೆ ಖರಾಬು ಸದರಿ ಭಾಗವು ಸಾರ್ವಜನಿಕರ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಮತ್ತು ಸರ್ಕಾರಿ ಬಂಡಿ ದಾರಿ ಹಾಗೂ ಬಂಡೆ ಖರಾಖು ಭಾಗದಲ್ಲಿ ಅಥವಾ ಮೇಲೆ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಉದ್ದೇಶಿಸಿ ಈ ಮೂಲಕ ಘೋಷಿಸುತ್ತದೆ.

2. ಸಾರ್ವಜನಿಕರ ಸರ್ಕಾರಿ ಬಂಡಿ ದಾರಿ ಹಾಗೂ ಬಂಡೆ ಖರಾಬು ಜೊತೆಗೆ ಸದರಿ ಸರ್ಕಾರಿ ಬಂಡಿ ದಾರಿ ಹಾಗೂ ಬಂಡೆ ಖರಾಬು ಸದರಿ ಭಾಗದಲ್ಲಿ ಅಥವಾ ಅದರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು, ಈ ಅಧಿಸೂಚನೆಯನ್ನು ಹೊರಡಿಸಿದ ತೊಂಭತ್ತು (90) ದಿನದೊಳಗೆ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು ಅಂಥ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮವು ಸಂಭವಿಸಿರಬಹುದಾದ ರೀತಿಯನ್ನು ಮತ್ತು ಅಂತಹ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಲೈಮ್ ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಜಿಲ್ಲೆಯ ಡೆಪ್ಯೂಟಿ ಕಮೀಷನರ್‌ರವರಿಗೆ ಬರಹದಲ್ಲಿ ತಿಳಿಸತಕ್ಕದ್ದು, ಮತ್ತು ಸದರಿ ಆಕ್ಷೇಪಣೆಗಳನ್ನು ಮತ್ತು ಕ್ಲೈಮ್‌ಗಳನ್ನು ಸದರಿ ಪ್ರಕರಣದಲ್ಲಿ ಉಪಬಂಧಿಸಿರುವಂತೆ ಡೆಪ್ಯೂಟಿ ಕಮೀಷನರರು ಪರಿಶೀಲಿಸತಕ್ಕದ್ದು.

ಅನುಸೂಚಿ

ಭಾಗ ಇತ್ಯಾದಿ ಇರುವ ಗ್ರಾಮಗಳು	ಕೆ.ಆರ್. ಪುರ
ತಾಲ್ಲೂಕು	ಬೆಂಗಳೂರು ಪೂರ್ವ
ಜಿಲ್ಲೆ	ಬೆಂಗಳೂರು ನಗರ
ಜಮೀನಿನ ಮೊದಲಾದುದರ ಭಾಗ ಅಥವಾ ಭಾಗಗಳ ವರ್ಣನೆ	28 ರಲ್ಲಿ 0–13 ಗುಂ., 34 ರಲ್ಲಿ 0–11 ಗುಂ., 35 ರಲ್ಲಿ 0–20 ಗುಂ., 36 ರಲ್ಲಿ 1–08 ಎ.ಗುಂ.
ಜಮೀನಿನ ಭಾಗ ಅಥವಾ ಭಾಗಗಳ ಸರಿಸುಮಾರು ವಿಸ್ತೀರ್ಣ	2–12 ಎ.ಗುಂ.
ಮೇರೆ	ನಕ್ಷೆಯಂತೆ ಪೂರ್ವ: ಪಶ್ಚಿಮ: ಉತ್ತರ: ದಕ್ಷಿಣ:
ಸಾರ್ವಜನಿಕ ರಸ್ತೆ, ಬೀದಿ, ಗಲ್ಲಿ, ದಾರಿ ಅಥವಾ ಅದರ ಭಾಗ	2–12 ಎ.ಗುಂ. ಸರ್ಕಾರಿ ಬಂಡಿ ದಾರಿ ಹಾಗೂ ಬಂಡೆ ಖರಾಬು ಸಕ್ರಮೀಕರಣಗೊಳಿಸುವ ಬಗ್ಗೆ.

ತಹಶೀಲ್ದಾರ್,

ಪಿ.ಆರ್. 476 ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್. ಪುರ, ಬೆಂಗಳೂರು

ಕಂದಾಯ ಸಚಿವಾಲಯ

ತಿದ್ದುಪಡಿ ಅಧಿಸೂಚನೆ

ಸಂಖ್ಯೆ: ಕಂಇ 64 ಭೂ ಸ್ವಾ ತು 2009, ದಿನಾಂಕ: 12ನೇ ಅಕ್ಟೋಬರ್ 2009

ತಿಪಟೂರು ಪಟ್ಟಣದ ಮಧ್ಯಭಾಗದಲ್ಲಿ ಹಾದು ಹೋಗುತ್ತಿರುವ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ 206ರಲ್ಲಿ ತಿಪಟೂರು ಪಟ್ಟಣದ ಕೋಡಿ ವೃತ್ತದಿಂದ ಸಿಂಗ್ರಿ ನಂಜಪ್ಪ ವೃತ್ತದವರೆಗೆ 2 ಪಾರ್ಶ್ವಗಳಲ್ಲಿರುವ ನಿವೇಶನ, ಕಟ್ಟಡಗಳನ್ನು ತುರ್ತು ವಿಧಿ ಬಳಸಿ ಭೂ ಸ್ವಾಧೀನಪಡಿಸಿಕೊಳ್ಳುವ ಬಗ್ಗೆ ಕರ್ನಾಟಕ ಭೂ ಸ್ವಾಧೀನ ಕಾಯ್ದೆ 1894 ರ ಕಲಂ 6(1)ರ ಕರಡು ಅಧಿಸೂಚನೆ ಸರ್ಕಾರದ ಆದೇಶ ಸಂಖ್ಯೆ ಕಂ.ಇ 64 ಭೂ ಸ್ವಾತು 2009 ದಿನಾಂಕ: 07.09.2009 ರಂದು ಅನುಮೋದನೆಗೊಂಡಿದ್ದು, ದಿನಾಂಕ:10.09.2009 ರಂದು ಕರ್ನಾಟಕ ರಾಜ್ಯ ಪತ್ರ ಭಾಗ–6 ಪುಟ ಸಂಖ್ಯೆ 993 ರಿಂದ 1016 ರವರೆಗೆ ಪ್ರಕಟಿಸಲಾಗಿದೆ. ಸದರಿ ಪ್ರಕಟಣೆಯ ಮುಖಪುಟ ಸಂಖ್ಯೆ 993ರ ಅನುಸೂಚಿಯಲ್ಲಿ ಚಕ್ಕುಬಂದಿ ಕಾಲಂನಲ್ಲಿ ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ ಎಂಬುದಾಗಿರುವುದನ್ನು ಮುದ್ರಣ ದೋಷದ ಕೈ ತಪ್ಪಿನಿಂದ ಕೈ ಬಿಡಲಾಗಿದೆ. ಆದ್ದರಿಂದ ಈ ನ್ಯೂನತೆಯನ್ನು ಸರಿಪಡಿಸಿ ಈ ಕೆಳಕಂಡಂತೆ ತಿದ್ದುಪಡಿ ಮಾಡಿದೆ.

ಹಾಲಿ ಇರುವುದು				ತಿದ್ದುಪಡಿ ಮಾಡಿರುವುದು			
ಚಕ್ಕುಬಂದಿ				ಚಕ್ಕುಬಂದಿ			
				ಉತ್ತರ	ದಕ್ಷಿಣ	ಪೂರ್ವ	ಪಶ್ಚಿಮ
4	5	6	7	4	5	6	7

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 486

ಎಂ. ವೆಂಕಟೇಶಮೂರ್ತಿ

ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಭೂಸ್ವಾಧೀನ–2 ಮತ್ತು ಪುನರ್ವಸತಿ)

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ನಮೂನೆ–27

ನಂ.ಎಲ್‌ಎನ್‌ಡಿ.ಸಿಆರ್.136/08–09, ದಿನಾಂಕ: 16ನೇ ಅಕ್ಟೋಬರ್ 2009

ವಿಷಯ: ಚಿಕ್ಕಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ಆವಲಹಳ್ಳಿ ಗ್ರಾಮದ ಸ.ನಂ.152 ರಲ್ಲಿ 3–12 ಎಕರೆ ಜಮೀನನ್ನು ಅಂಗರೇಖನಹಳ್ಳಿ ಗ್ರಾಮದ ಪ್ರೌಢಶಾಲೆಗೆ ಶಾಲಾ ಕಟ್ಟಡ ಹಾಗೂ ಶಾಲಾ ಆವರಣಕ್ಕಾಗಿ ಶಿಕ್ಷಣ ಇಲಾಖೆಗೆ ವರ್ಗಾಯಿಸುವ ಸಲುವಾಗಿ ಸಾರ್ವಜನಿಕ ಹಕ್ಕನ್ನು ನಿವೃತ್ತಿಗೊಳಿಸಿ ಸರ್ಕಾರಿ ಗೋಕುಂಟೆ ಶೀರ್ಷಿಕೆಯಿಂದ ತಗ್ಗಿಸಿ ಮುಂದಿನ ಕ್ರಮ ಜರುಗಿಸುವ ಸಲುವಾಗಿ.

ಉಲ್ಲೇಖ:
1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ಪತ್ರ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.45/08–09, ದಿನಾಂಕ: 21.07.2008.
2. ಅಸಿಸ್ಟೆಂಟ್ ಕಮೀಷನರ್, ಚಿಕ್ಕಬಳ್ಳಾಪುರ ಉಪವಿಭಾಗ, ಚಿಕ್ಕಬಳ್ಳಾಪುರ ಇವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.206/06–07, ದಿನಾಂಕ:04/04/2007.
3. ತಹಶೀಲ್ದಾರ್, ಚಿಕ್ಕಬಳ್ಳಾಪುರ ತಾಲ್ಲೂಕು ರವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.193/06–07, ದಿನಾಂಕ: 28/02/2007 ಮತ್ತು 27/01/2009.

94ನೇ ನಿಯಮದ 68(1) ಪ್ರಕರಣದ ಮೇರೆಗಿನ ಘೋಷಣೆ

ಸರ್ಕಾರದ ಸ್ವತ್ತಾಗಿರುವ ಹಾಗೂ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ 'ಸರ್ಕಾರಿ ಗೋಕುಂಟೆ' ಪ್ರದೇಶದ ಜಮೀನು ಸಾರ್ವಜನಿಕ ಉಪಯೋಗಕ್ಕೆ ಸದರಿ ಉದ್ದೇಶಕ್ಕೆ ಅಗತ್ಯವಿಲ್ಲವೆಂದು ಕಂಡು ಬಂದಿರುವುದರಿಂದ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ 68ನೇ ಪ್ರಕರಣದ (1)ನೇ ಉಪ ಪ್ರಕರಣದಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಸದರಿ ಸರ್ಕಾರಿ ಗೋಕುಂಟೆ ಪ್ರದೇಶವು ಸದರಿ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಸದರಿ ಸರ್ಕಾರಿ ಗೋಕುಂಟೆ ಪ್ರದೇಶದ ಜಮೀನಿನ ಮೇಲೆ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಉದ್ದೇಶಿಸಿ ಈ ಮೂಲಕ ಘೋಷಿಸುತ್ತದೆ.

ಸದರಿ 'ಸರ್ಕಾರಿ ಗೋಕುಂಟೆ' ಪ್ರದೇಶದಲ್ಲಿ ಅಥವಾ ಅವರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ

ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು ಈ ಜಮೀನನ್ನು ಸರ್ಕಾರದ ಇತರೇ ಉದ್ದೇಶಕ್ಕೆ ಪಡೆದುಕೊಳ್ಳುತ್ತಿರುವುದರಿಂದ ಈ ಅಧಿಸೂಚನೆಯನ್ನು ಹೊರಡಿಸಿದ ತೊಂಬತ್ತು ದಿನಗಳೊಳಗಾಗಿ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು ಅಂತಹ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮವು ಸಂಭವಿಸಿರಬಹುದಾದ ರೀತಿಯನ್ನು ಮತ್ತು ಅಂತಹ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಲೈಮು ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಈ ಕಛೇರಿಗೆ ಲಿಖಿತ ರೂಪದಲ್ಲಿ ತಿಳಿಸತಕ್ಕದ್ದು ಮತ್ತು ಆಕ್ಷೇಪಣೆಗಳನ್ನು ಮತ್ತು ಕ್ಲೈಮುಗಳನ್ನು ಸದರಿ ಪ್ರಕರಣದಲ್ಲಿ ಉಪಬಂಧಿಸಿರುವಂತೆ ಪರಿಶೀಲಿಸಲಾಗುವುದು.

ಅನುಸೂಚಿ

ಜಿಲ್ಲೆ	:	ಚಿಕ್ಕಬಳ್ಳಾಪುರ
ತಾಲ್ಲೂಕು	:	ಚಿಕ್ಕಬಳ್ಳಾಪುರ
ಹೋಬಳಿ	:	ಕಸಬಾ
ಗ್ರಾಮ	:	ಆವಲಹಳ್ಳಿ

ಸ.ನಂ. 152 ರಲ್ಲಿ 3–12 ಎಕರೆ ಜಮೀನು ಸಾರ್ವಜನಿಕರ ಹಕ್ಕು ನಿವೃತ್ತಿಗಾಗಿ ಪ್ರಸ್ತಾವಿಸಲಾಗಿದೆ.

ಚೆಕ್ಕುಬಂದಿ

ಪೂರ್ವಕ್ಕೆ	:	ಅಂಗರೇಖನಹಳ್ಳಿ ಗಡಿ
ಪಶ್ಚಿಮಕ್ಕೆ	:	ಸರ್ವೆ ನಂಬರ್ 151 ರ ಜಮೀನು
ಉತ್ತರಕ್ಕೆ	:	ಸರ್ವೆ ನಂಬರ್ 42 ರ ಜಮೀನು
ದಕ್ಷಿಣಕ್ಕೆ	:	ಸರ್ವೆ ನಂಬರ್ 151 ರ ಜಮೀನು

ಪಿ.ಆರ್. 487 ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ನಮೂನೆ–27

ನಂ.ಎಲ್ಎನ್ಡಿ.ಸಿಆರ್.70/08–09, ದಿನಾಂಕ: 22ನೇ ಅಕ್ಟೋಬರ್ 2009

ವಿಷಯ: ಚಿಕ್ಕಬಳ್ಳಾಪುರ ತಾಲ್ಲೂಕು, ನಂದಿ ಹೋಬಳಿ, ತೌಡನಹಳ್ಳಿ ಗ್ರಾಮದ ಸ.ನಂ.78 ರಲ್ಲಿ 8–00 ಎಕರೆ ಜಮೀನನ್ನು ಸೈನಿಕರಾದ ಶ್ರೀ ಆನಂದರಾಜು ಬಿನ್ ಹನುಮಪ್ಪ ರವರಿಗೆ ಮಂಜೂರು ಮಾಡುವ ವಿಚಾರದಲ್ಲಿ ಸಾರ್ವಜನಿಕ ಹಕ್ಕನ್ನು ನಿವೃತ್ತಿಗೊಳಿಸಿ, ಸದರಿ ಶೀರ್ಷಿಕೆಯಿಂದ ತಗ್ಗಿಸಿ ಮುಂದಿನ ಕ್ರಮ ಕೈಗೊಳ್ಳುವ ವಿಚಾರ.

ಉಲ್ಲೇಖ:
1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ಪತ್ರ ಸಂಖ್ಯೆ: ಎಲ್ಎನ್ಡಿ.ಸಿಆರ್.70/08–09, ದಿನಾಂಕ: 20.08.2008.
2. ಅಸಿಸ್ಟೆಂಟ್ ಕಮೀಷನರ್, ಚಿಕ್ಕಬಳ್ಳಾಪುರ ಉಪವಿಭಾಗ, ಚಿಕ್ಕಬಳ್ಳಾಪುರ ಇವರ ವರದಿ ಸಂಖ್ಯೆ: ಎಲ್ಎನ್ಡಿ.ಸಿಆರ್.3/07–08, ದಿನಾಂಕ:19/04/2007.
3. ತಹಶೀಲ್ದಾರ್, ಚಿಕ್ಕಬಳ್ಳಾಪುರ ತಾಲ್ಲೂಕು ರವರ ವರದಿ ಸಂಖ್ಯೆ: ಎಲ್ಎನ್ಡಿ.ಸಿಆರ್.133/06–07, ದಿನಾಂಕ: 07/04/2007, 11/07/2007, 11/06/2008 ಮತ್ತು 20/03/2009.

94ನೇ ನಿಯಮದ 68(1) ಪ್ರಕರಣದ ಮೇರೆಗಿನ ಘೋಷಣೆ

ಸರ್ಕಾರದ ಸ್ವತ್ತಾಗಿರುವ ಹಾಗೂ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ 'ಖರಾಬ್' ಪ್ರದೇಶದ ಜಮೀನು ಸಾರ್ವಜನಿಕ ಉಪಯೋಗಕ್ಕೆ ಸದರಿ ಉದ್ದೇಶಕ್ಕೆ ಅಗತ್ಯವಿಲ್ಲವೆಂದು ಕಂಡು ಬಂದಿರುವುದರಿಂದ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ 68ನೇ ಪ್ರಕರಣದ (1)ನೇ ಉಪ ಪ್ರಕರಣದಂತೆ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಸದರಿ ಸರ್ಕಾರಿ ಖರಾಬು ಪ್ರದೇಶವು ಸದರಿ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಸದರಿ ಸರ್ಕಾರಿ ಖರಾಬು ಪ್ರದೇಶದ ಜಮೀನಿನ ಮೇಲೆ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಉದ್ದೇಶಿಸಿ ಈ ಮೂಲಕ ಘೋಷಿಸುತ್ತದೆ.

ಸದರಿ 'ಖರಾಬು' ಪ್ರದೇಶದಲ್ಲಿ ಅಥವಾ ಅವರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು ಈ ಜಮೀನನ್ನು ಸರ್ಕಾರದ ಇತರೇ ಉದ್ದೇಶಕ್ಕೆ ಪಡೆದುಕೊಳ್ಳುತ್ತಿರುವುದರಿಂದ ಈ ಅಧಿಸೂಚನೆಯನ್ನು ಹೊರಡಿಸಿದ ತೊಂಬತ್ತು ದಿನಗಳೊಳಗಾಗಿ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು ಅಂತಹ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮವು ಸಂಭವಿಸಿರಬಹುದಾದ ರೀತಿಯನ್ನು ಮತ್ತು ಅಂತಹ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಲೈಮು ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಈ ಕಛೇರಿಗೆ ಲಿಖಿತ ರೂಪದಲ್ಲಿ ತಿಳಿಸತಕ್ಕದ್ದು ಮತ್ತು ಆಕ್ಷೇಪಣೆಗಳನ್ನು ಮತ್ತು ಕ್ಲೈಮುಗಳನ್ನು ಸದರಿ ಪ್ರಕರಣದಲ್ಲಿ ಉಪಬಂಧಿಸಿರುವಂತೆ ಪರಿಶೀಲಿಸಲಾಗುವುದು.

ಅನುಸೂಚಿ

ಜಿಲ್ಲೆ	:	ಚಿಕ್ಕಬಳ್ಳಾಪುರ
ತಾಲ್ಲೂಕು	:	ಚಿಕ್ಕಬಳ್ಳಾಪುರ
ಹೋಬಳಿ	:	ನಂದಿ
ಗ್ರಾಮ	:	ತೌಡನಹಳ್ಳಿ

ಸರ್ವೆ ನಂಬರು 78 ರ ಪೈಕಿ 8–00 ಎಕರೆ ಜಮೀನು ಮಿಲಿಟರಿಯಲ್ಲಿ ಸೈನಿಕನಾಗಿ ಕೆಲಸ ನಿರ್ವಹಿಸುತ್ತಿರುವ ಶ್ರೀ ಆನಂದರಾಜು ಬಿನ್ ಹನುಮಪ್ಪ ಇವರಿಗೆ ಸೈನಿಕರ ಕೋಟಾದಲ್ಲಿ ಮಂಜೂರು ಮಾಡಲು ಸಾರ್ವಜನಿಕರ ಹಕ್ಕು ನಿವೃತ್ತಿಗಾಗಿ ಪ್ರಸ್ತಾಪಿಸಲಾಗಿದೆ.

ಚೆಕ್ಕುಬಂದಿ

ಪೂರ್ವಕ್ಕೆ	:	ಸ.ನಂ.78 ರ ಉಳಿಕೆ ಜಮೀನು
ಪಶ್ಚಿಮಕ್ಕೆ	:	ಗಡಿ
ಉತ್ತರಕ್ಕೆ	:	ಗಡಿ
ದಕ್ಷಿಣಕ್ಕೆ	:	ಸ.ನಂ. 73, ಸ.ನಂ.103 ಮತ್ತು ಸ.ನಂ. 104 ರ ಜಮೀನು

ಪಿ.ಆರ್. 488 ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ

ನಮೂನೆ–27

ನಂ.ಎಲ್‌ಎನ್‌ಡಿ.ಸಿಆರ್.208/08–09, ದಿನಾಂಕ: 22ನೇ ಅಕ್ಟೋಬರ್ 2009

ವಿಷಯ: ಬಾಗೇಪಲ್ಲಿ ತಾಲ್ಲೂಕು, ಕಸಬಾ ಹೋಬಳಿ, ಕೃಷ್ಣಾಪುರ ಗ್ರಾಮದ ಸ.ನಂ.19 ರಲ್ಲಿ 4–38 ಎಕರೆ ಜಮೀನನ್ನು ಸೈನಿಕ ಕೋಟಾದಡಿಯಲ್ಲಿ ಶ್ರೀ ವೈ.ಎನ್. ಮಂಜುನಾಥರೆಡ್ಡಿ ಬಿನ್ ವೈ.ಸಿ. ನಾರಾಯಣರೆಡ್ಡಿ ರವರಿಗೆ ಮಂಜೂರು ಮಾಡುವ ವಿಚಾರದಲ್ಲಿ ಸಾರ್ವಜನಿಕ ಹಕ್ಕನ್ನು ನಿವೃತ್ತಿಗೊಳಿಸಿ, ಸದರಿ ಶೀರ್ಷಿಕೆಯಿಂದ ತಗ್ಗಿಸಿ ಮುಂದಿನ ಕ್ರಮ ಕೈಗೊಳ್ಳುವ ವಿಚಾರ.

ಉಲ್ಲೇಖ: 1. ಅಸಿಸ್ಟೆಂಟ್ ಕಮೀಷನರ್, ಚಿಕ್ಕಬಳ್ಳಾಪುರ ಉಪವಿಭಾಗ, ಚಿಕ್ಕಬಳ್ಳಾಪುರ ಇವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.93/08–09, ದಿನಾಂಕ:19/01/2009.

2. ತಹಶೀಲ್ದಾರ್, ಬಾಗೇಪಲ್ಲಿ ತಾಲ್ಲೂಕು ರವರ ವರದಿ ಸಂಖ್ಯೆ: ಎಲ್‌ಎನ್‌ಡಿ.ಸಿಆರ್.23/07–08, ದಿನಾಂಕ: 04/07/2008 ಮತ್ತು 19/08/2009.

94ನೇ ನಿಯಮದ 68(1) ಪ್ರಕರಣದ ಮೇರೆಗಿನ ಘೋಷಣೆ

ಸರ್ಕಾರದ ಸ್ವತ್ತಾಗಿರುವ ಹಾಗೂ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ 'ಸರ್ಕಾರಿ ಖರಾಬ್' ಪ್ರದೇಶದ ಜಮೀನು ಸಾರ್ವಜನಿಕ ಉಪಯೋಗಕ್ಕೆ ಸದರಿ ಉದ್ದೇಶಕ್ಕೆ ಅಗತ್ಯವಿಲ್ಲವೆಂದು ಕಂಡು ಬಂದಿರುವುದರಿಂದ ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ 68ನೇ ಪ್ರಕರಣದ (1)ನೇ ಉಪ ಪ್ರಕರಣದಂತೆ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಸದರಿ ಸರ್ಕಾರಿ ಖರಾಬು ಪ್ರದೇಶವು ಸದರಿ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಸದರಿ ಸರ್ಕಾರಿ

ಖರಾಬು ಪ್ರದೇಶದ ಜಮೀನಿನ ಮೇಲೆ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಉದ್ದೇಶಿಸಿ ಈ ಮೂಲಕ ಘೋಷಿಸುತ್ತದೆ.

ಸದರಿ 'ಸರ್ಕಾರಿ ಖರಾಬು' ಪ್ರದೇಶದಲ್ಲಿ ಅಥವಾ ಅವರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು ಈ ಜಮೀನನ್ನು ಸರ್ಕಾರದ ಇತರೇ ಉದ್ದೇಶಕ್ಕೆ ಪಡೆದುಕೊಳ್ಳುತ್ತಿರುವುದರಿಂದ ಈ ಅಧಿಸೂಚನೆಯನ್ನು ಹೊರಡಿಸಿದ ತೊಂಬತ್ತು ದಿನಗಳೊಳಗಾಗಿ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು ಅಂತಹ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮವು ಸಂಭವಿಸಿರಬಹುದಾದ ರೀತಿಯನ್ನು ಮತ್ತು ಅಂತಹ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಲೈಮು ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಈ ಕಛೇರಿಗೆ ಲಿಖಿತ ರೂಪದಲ್ಲಿ ತಿಳಿಸತಕ್ಕದ್ದು ಮತ್ತು ಆಕ್ಷೇಪಣೆಗಳನ್ನು ಮತ್ತು ಕ್ಲೈಮುಗಳನ್ನು ಸದರಿ ಪ್ರಕರಣದಲ್ಲಿ ಉಪಬಂಧಿಸಿರುವಂತೆ ಪರಿಶೀಲಿಸಲಾಗುವುದು.

ಅನುಸೂಚಿ

ಜಿಲ್ಲೆ	:	ಚಿಕ್ಕಬಳ್ಳಾಪುರ
ತಾಲ್ಲೂಕು	:	ಬಾಗೇಪಲ್ಲಿ
ಹೋಬಳಿ	:	ಕಸಬಾ
ಗ್ರಾಮ	:	ಕೃಷ್ಣಾಪುರ

ಸರ್ವೆ ನಂಬರು 19 ರ ಪೈಕಿ 4–38 ಎಕರೆ ಜಮೀನು ಮಿಲಿಟರಿ ಕೋಟಾದಡಿಯಲ್ಲಿ ಶ್ರೀ ವೈ.ಎನ್. ಮಂಜುನಾಥರೆಡ್ಡಿ ಬಿನ್ ವೈ.ಸಿ. ನಾರಾಯಣರೆಡ್ಡಿ ರವರಿಗೆ ಮಂಜೂರು ಮಾಡಲು ಸಾರ್ವಜನಿಕರ ಹಕ್ಕು ನಿವೃತ್ತಿಗಾಗಿ ಪ್ರಸ್ತಾಪಿಸಲಾಗಿದೆ.

ಚೆಕ್ಕುಬಂದಿ

ಪೂರ್ವಕ್ಕೆ	:	ಬಂಡಿವಾರಿ
ಪಶ್ಚಿಮಕ್ಕೆ	:	ಗುಟ್ಟ
ಉತ್ತರಕ್ಕೆ	:	ಶ್ರೀ ಎ. ವೆಂಕಟರೆಡ್ಡಿರವರ ಜಮೀನು
ದಕ್ಷಿಣಕ್ಕೆ	:	ಸ.ನಂ.19ರ ಉಳಿಕೆ ಜಮೀನು

ಪಿ.ಆರ್. 489 ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.

ತಹಶೀಲ್ದಾರ್‌ರವರ ಕಾರ್ಯಾಲಯ, ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್. ಪುರ, ಬೆಂಗಳೂರು

ಸಾರ್ವಜನಿಕ ಪ್ರಕಟಣೆ

ನಮೂನೆ 27

94ನೇ ನಿಯಮದ 68(1)ನೇ ಪ್ರಕರಣದ ಮೇರೆಗಿನ ಘೋಷಣೆ

ನಂ. ಎಲ್.ಎನ್.ಡಿ./ಸಿಆರ್/41/08–09, ದಿನಾಂಕ: 21ನೇ ಜುಲೈ 2009

